# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಭಾರತೀಯ ಹವಾಮಾನ ಇಲಾಖೆ

ಗ್ರಾಮೀಣ ಕೃಷಿ ಹವಾಮಾನ ಸೇವಾ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ನಾಗನಹಳ್ಳಿ, ಮೈಸೂರು 570 003

ದಿನಾಂಕ: 02-01-2024

## ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಕೊಡಗು ಜಿಲ್ಲೆಯ ಹವಾಮಾನ ಮತ್ತು ಕೃಷಿಕಾರ್ಯಕ್ರಮಗಳ ವರದಿ ಪತ್ರಿಕೆ

**ಹವಾಮಾನದ ಮುನ್ಸೂಚನೆ (03–01–2024 ರಿಂದ 07–01–2024)**

| Parameters | 03.01.2024 | 04.01.2024 | 05.01.2024 | 06.01.2024 | 07.01.2024 |
|---|---|---|---|---|---|
| ಮಳೆ (ಮಿ.ಮೀ) | 1 | 1 | 1 | 1 | 1 |
| ಗರಿಷ್ಠ ಉಷ್ಣಾಂಶ ($^{0}$ಸೆ) | 31 | 31 | 31 | 31 | 31 |
| ಕನಿಷ್ಠ ಉಷ್ಣಾಂಶ ($^{0}$ಸೆ) | 16 | 16 | 16 | 16 | 16 |
| ಮೋಡ (ಆಕ್ಟ್ಸ್) | 4 | 5 | 5 | 5 | 5 |
| ಗರಿಷ್ಠ ಗಾಳಿಯ ತೇವಾಂಶ (%) | 98 | 98 | 98 | 99 | 99 |
| ಕನಿಷ್ಠ ಗಾಳಿಯ ತೇವಾಂಶ (%) | 84 | 84 | 84 | 86 | 86 |
| ಗಾಳಿಯ ವೇಗ (ಕಿ.ಮೀ/ ಗಂಟೆ) | 5 | 6 | 7 | 7 | 7 |
| ಗಾಳಿಯ ದಿಕ್ಕು( ಡಿಗ್ರಿ) | 81 | 69 | 68 | 77 | 70 |

**ಮುನ್ಸೂಚನೆಯ ಸಾರಾಂಶ**

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಈ ವಾರದ ಮುನ್ಸೂಚನೆ ಕೊಡಗು ಜಿಲ್ಲೆಯಲ್ಲಿ ದಿನಾಂಕ: 03–01–2024 ರಿಂದ 07–01–2024 ವರೆಗೆ ಮೋಡ ಕವಿದ ವಾತಾವರಣವಿದ್ದು, ಹಗುರ ಮಳೆ ಬರುವ ಸಂಭವವಿದೆ. ಗರಿಷ್ಠ ಉಷ್ಣಾಂಶ 31°C. ಮತ್ತು ಕನಿಷ್ಠ ಉಷ್ಣಾಂಶ 16°C ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇಕಡ 98–99% ವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇಕಡ 84–86% ವರೆಗೆ ಮತ್ತು ಗಾಳಿಯು ಗಂಟೆಗೆ 5–7 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ.

**ಕೃಷಿ ಚಟುವಟಿಕೆಗಳ ಬಗ್ಗೆ ಅನುಸರಿಸಬಹುದಾದ ವಿವರ:**

| ಬೆಳೆ/ ಜಾನುವಾರಗಳು | ರೋಗ ಮತ್ತು ಕೀಟ | ಹಾನಿ ಲಕ್ಷಣಗಳು | ಕೃಷಿ ಸಲಹೆಗಳು |
|---|---|---|---|

- ಜಿಲ್ಲೆಯಲ್ಲಿ ಮುಂದಿನ 3–5 ದಿನಗಳು ಹಗುರ ಮಳೆ ಬರುವ ಸಾಧ್ಯತೆ ಇರುವುದರಿಂದ ಬೆಳೆಗಳ ಕಟಾವು ಮಾಡುವ ರೈತರು ಸೂಕ್ತ ಮುನ್ನೆಚ್ಚರಿಕೆವಹಿಸಬೇಕು.
- ಕಟಾವು ಮಾಡಿದದವಸ ಧಾನ್ಯಗಳನ್ನು ಚೆನ್ನಾಗಿ ಒಣಗಿಸಿ ಹೆಚ್ಚು ದಿನ ಕೆಡದಂತೆ ಇಡಲು ಏಕದಳ ಧಾನ್ಯಗಳ ತೇವಾಂಶ ಶೇಕಡ 11 ರಿಂದ 12ರಷ್ಟು, ದ್ವಿದಳ ಧಾನ್ಯಗಳ ತೇವಾಂಶ ಶೇಕಡ 9 ರಷ್ಟು, ಎಣ್ಣೆಕಾಳುಗಳ ತೇವಾಂಶ ಶೇಕಡ 8 ರಷ್ಟು ಮತ್ತುತರಕಾರಿ ಬೀಜಗಳ ತೇವಾಂಶ ಶೇಕಡ 5 ರಿಂದ 6 ರಷ್ಟು ಇರಬೇಕು.

| ಭತ್ತ | ಕಟಾವು | |
|---|---|---|
| ತೆಂಗು | ರುಗೋಸ್ ಬಿಳಿ ನೊಣ | ಬಿಳಿ ನೊಣಗಳು ಎಲೆಗಳ ಕೆಳಭಾಗದಲ್ಲಿ ರಸವನ್ನು ಹೀರುತ್ತವೆ. ಹೆಚ್ಚು ರಸಹೀರುವುದರಿಂದ ಸಿಹಿಯಾದದ್ರವ್ಯವನ್ನು ಹೊರಹಾಕುತ್ತದೆ, ಇದು ಕಪ್ಪು ಶಿಲೀಂಧ್ರದ (ಕ್ಯಾಪ್ನೋಡಿಯಮ್) ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಸಸ್ಯದ ದ್ಯುತಿಸಂಶ್ಲೇಷಕ ಮೇಲೆ ಪರಿಣಾಮ ಬೀರುತ್ತದೆ. |

| | | |
|---|---|---|
| | | 2.5% ಮೈದಾ ಪೇಸ್ಟ್ ದ್ರಾವಣವನ್ನು ಡಿಟರ್ಜೆಂಟ್/ಖಾದಿ ಸೋಪ್ @ 5 ಗ್ರಾಂ/ಲೀ ನೊಂದಿಗೆ ಬೆರೆಸಿ ಸಿಂಪಡಿಸುವ ಮೂಲಕ ಎಲೆಯ ಮೇಲ್ಮೈಯಲ್ಲಿ ಕಪ್ಪು ಶಿಲೀಂಧ್ರದ(ಕ್ಯಾಪ್ನೋಡಿಯಮ್) ಬೆಳವಣಿಗೆಯನ್ನು ಹೊರಹಾಕಬಹುದು.<br>ಹೆಚ್ಚು ಹಾನಿಯಾದಲ್ಲಿ, ಬೇವಿನ ಎಣ್ಣೆ 0.5% ಅಥವಾ NSKE 5% ಅನ್ನು ಮಾತ್ರ ಸಿಂಪಡಿಸಿ ಮತ್ತು ಯಾವುದೇ ರೀತಿಯ ಕೀಟನಾಶಕಗಳನ್ನು ಸಿಂಪಡಿಸುವುದು ಸೂಕ್ತವಲ್ಲ. |

- ಬೆಳಗಿನ ಜಾವ ಹಾಗೂ ರಾತ್ರಿ ವೇಳೆ ಉಷ್ಣಾಂಶದಲ್ಲಿ ಸ್ವಲ್ಪ ಇಳಿತವಿರುವುದರಿಂದ ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ವಿದ್ಯುತ್ ಬಲ್ಬ್ ಅನ್ನು ಒದಗಿಸುವ ಮೂಲಕ ಕಾಪಾಡಿಕೊಳ್ಳುವುದು.
- ಎರೆಹುಳು ಸಾಕಾಣಿಕ ಘಟಕದಲ್ಲಿ ಹೆಚ್ಚಿನ ತೇವಾಂಶ ಇರದಂತೆ ಎಚ್ಚರಿಕೆ ವಹಿಸಬೇಕು. ಎರೆಕುಣಿಗಳಲ್ಲಿ ಎರೆಗೊಬ್ಬರ ಉತ್ಪಾದನೆಯಾಗುವವರೆಗೆ ಶೇ. 60–70 ರಷ್ಟು ತೇವಾಂಶ ಇರುವ ಹಾಗೆ ನೋಡಿಕೊಳ್ಳಬೇಕು.

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು"ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ದೂರವಾಣಿ ಮೂಲಕ ಡಾ॥. ಸಿ. ರಾಮಚಂದ್ರ, ಹಿರಿಯ ಕ್ಷೇತ್ರ ಅಧೀಕ್ಷಕರು/ ಡಾ. ಸುಮಂತ್ ಕುಮಾರ್, ಜಿ. ವಿ, ಸಹ ಸಂಶೋಧಕರು, ದೂರವಾಣಿ ಸಂಖ್ಯೆ. 08212591267/ 9535345814 ರವರನ್ನು ಸಂಪರ್ಕಿಸಬಹುದು.

ಕೃಷಿ ಹವಾಮಾನ ಕ್ಷೇತ್ರ ವಿಭಾಗ,
ನಾಗನಹಳ್ಳಿ, ಮೈಸೂರು